ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	583(836)
ಸದಸ್ಯರ ಹೆಸರು	ಶ್ರೀ ಎನ್ ಎಸ್ ಭೋಸರಾಜು(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	11-03-2020
ಉತ್ತರಿಸುವ ಸಚಿವರು	ಕೃಷಿ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>1</td><td>ರಾಯಚೂರು ಜಿಲ್ಲೆಯಲ್ಲಿ ಸಿರಿಧಾನ್ಯಗಳ ಉತ್ಪಾದನೆ ಹೆಚ್ಚಿಸಲು ರೈತರಿಗೆ ನೀಡಿರುವ ಸೌಲಭ್ಯಗಳೇನು;</td><td>
ರಾಯಚೂರು ಜಿಲ್ಲೆಯಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಹೆಚ್ಚಿಸಲು ಕರ್ನಾಟಕ ಸರ್ಕಾರವು ಈ ಕೆಳಕಂಡ ಯೋಜನೆಗಳನ್ನು ಹಮ್ಮಿಕೊಂಡಿರುತ್ತದೆ.

1. ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿ(NFSM): ನ್ಯೂಟ್ರೀಸೀರಿಯಲ್ಸ್(ಜೋಳ ಮತ್ತು ಸಜ್ಜೆ):

ಜೋಳ ಮತ್ತು ಸಜ್ಜೆ ಬೆಳೆಗಳನ್ನು ಬೆಳೆಯುವ ರೈತರಿಗೆ ಪ್ರಾತ್ಯಕ್ಷಿಕೆಗಳ ಮುಖಾಂತರ ಪ್ರತಿ ಹೆ.ಗೆ ರೂ. 6000/-ರಂತೆ ಸಹಾಯಧನವನ್ನು ನೇರವಾಗಿ ರೈತರ ಖಾತೆಗೆ ಸಂದಾಯ ಮಾಡುವ ಮೂಲಕ ಸಿರಿಧಾನ್ಯಗಳ ಉತ್ಪಾದನೆಯನ್ನು ಹೆಚ್ಚಿಸಲು ರೈತರನ್ನು ಪ್ರೋತ್ಸಾಹಿಸಲಾಗುತ್ತಿದೆ.

2. ರೈತಸಿರಿ ಯೋಜನೆ:
ಈ ಯೋಜನೆಯನ್ನು 2019-20 ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಸಿರಿಧಾನ್ಯ ಬೆಳೆಗಳಾದ ನವಣೆ, ಸಾಮೆ, ಹಾರಕ, ಕೊರಲೆ, ಊದಲು ಹಾಗೂ ಬರಗು ಬೆಳೆಯುವ ರೈತರಿಗೆ ಪ್ರೋತ್ಸಾಹಧನವಾಗಿ ಪ್ರತಿ ಹೆಕ್ಟೇರ್ ರೂ.10,000/- ರಂತೆ ಗರಿಷ್ಠ 2 ಹೆಕ್ಟೇರ್ ಗೆ ಮಾತ್ರ ಸೀಮಿತವಾಗುವಂತೆ ಪ್ರೋತ್ಸಾಹಧನವನ್ನು DBT ಮುಖಾಂತರ ರೈತರ ಖಾತೆಗೆ ವರ್ಗಾವಣೆ ಮಾಡಲಾಗುತ್ತಿದೆ.
ಈ ಮೇಲಿನ ಯೋಜನೆಗಳಡಿ ರಾಯಚೂರು ಜಿಲ್ಲೆಯಲ್ಲಿ ಸಾಧಿಸಿರುವ ಪ್ರಗತಿ ಈ ಕೆಳಗಿನಂತಿವೆ.

<table>
<tr><th>ಕ್ರ ಸಂ</th><th>ಯೋಜನೆ</th><th>ಭೌತಿಕ (ಹೆಕ್ಟೇರ್)</th><th>ಆರ್ಥಿಕ (ಲಕ್ಷಗಳಲ್ಲಿ)</th><th>ಫಲಾನುಭವಿಗಳ ಸಂಖ್ಯೆ</th></tr>
<tr><td>1</td><td>NFSM-Nutri cereals(ಜೋಳ ಮತ್ತು ಸಜ್ಜೆ):</td><td>1864</td><td>111.76</td><td>1715</td></tr>
<tr><td>2</td><td>ರೈತಸಿರಿ (ನವಣೆ, ಸಾಮೆ, ಹಾರಕ, ಕೊರಲೆ, ಊದಲು ಹಾಗೂ ಬರಗು)</td><td>760</td><td>76</td><td>994</td></tr>
<tr><td>ಒಟ್ಟು</td><td></td><td>2624</td><td>187.76</td><td>2709</td></tr>
</table>
</td></tr>
</table>

2	ರೈತರು ನೀರನ್ನು ಮಿತವಾಗಿ ಬಳಕೆ ಮಾಡಲು ಸಬ್ಸಿಡಿ ಮೂಲಕ ವಿತರಿಸುವ ಹನಿ ನೀರಾವರಿ ಪದ್ಧತಿ ಯೋಜನೆಯನ್ನು ಎಲ್ಲಾ ವರ್ಗದ ರೈತರಿಗೆ ವಿತರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇಲ್ಲದೇ ಇದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ರೈತರು ನೀರನ್ನು ಮಿತವಾಗಿ ಬಳಕೆ ಮಾಡಲು ಸಬ್ಸಿಡಿ ಮೂಲಕ ವಿತರಿಸುವ ಹನಿ ನೀರಾವರಿ ಪದ್ಧತಿ ಘಟಕಗಳನ್ನು ಎಲ್ಲಾ ವರ್ಗದ ರೈತರಿಗೆ 2.00 ಹೆಕ್ಟೇರ್ ಪ್ರದೇಶದವರೆಗೆ ಶೇ 90 ರ ಸಹಾಯಧನ ಮತ್ತು 2.00 ರಿಂದ 5.00 ಹೆಕ್ಟೇರ್ ಪ್ರದೇಶದವರೆಗೆ ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಲು ಶೇ.45 ರ ಸಹಾಯಧನ ಒದಗಿಸಲಾಗುತ್ತಿದೆ.

ಸಂಖ್ಯೆ: ಕೃಇ/ಕೃಇಕ/37/2020

(ಬಿ.ಸಿ. ಪಾಟೀಲ್)
ಕೃಷಿ ಸಚಿವರು